ಕರ್ನಾಟಕ ಸರ್ಕಾರ

# ಜಿಲ್ಲಾಧಿಕಾರಿಗಳ ಕಾರ್ಯಾಲಯ, ಚಿತ್ರದುರ್ಗ ಜಿಲ್ಲೆ, ಚಿತ್ರದುರ್ಗ.

ನಂ.ಚುನಾವಣೆ.ಸಿ.ಆರ್.108/2017-18 ದಿನಾಂಕ:11.06.2018

## ಪತ್ರಿಕಾ ಪ್ರಕಟಣೆ

ಚಿತ್ರದುರ್ಗ ಜಿಲ್ಲೆಯಲ್ಲಿ ಅವಧಿ ಮುಕ್ತಾಯಗೊಳ್ಳಲಿರುವ ನಗರ ಸ್ಥಳೀಯ ಸಂಸ್ಥೆಗಳಿಗೆ ಸಾರ್ವತ್ರಿಕ ಚುನಾವಣೆ ನಡೆಸಲು ಮಾನ್ಯ ರಾಜ್ಯ ಚುನಾವಣಾ ಆಯೋಗವು ಉದ್ದೇಶಿಸಿದ್ದು, ಅದರಂತೆ ಜಿಲ್ಲೆಯಲ್ಲಿ ಚಿತ್ರದುರ್ಗ ನಗರಸಭೆ, ಚಳ್ಳಕೆರೆ ನಗರಸಭೆ ಮತ್ತು ಹೊಸದುರ್ಗ ಪುರಸಭೆಗಳಿಗೆ ಚುನಾವಣೆ ನಡೆಯಲಿದ್ದು ಈ ಸಂಬಂಧ ದಿನಾಂಕ:11.06.2018ರಂದು ಕರಡು ಮತದಾರರ ಪಟ್ಟಿಯನ್ನು ಪ್ರಚುರ ಪಡಿಸಲಾಗಿರುತ್ತದೆ

ಮತದಾರರ ಹೆಸರು ವಾಸವಿರುವ ವಾರ್ಡಿನ ವ್ಯಾಪ್ತಿಯಲ್ಲಿ ಇರದೆ ಬೇರೆ ವಾರ್ಡಿನ ಮತದಾರರ ಪಟ್ಟಿಯಲ್ಲಿ ಸೇರ್ಪಡೆಯಾಗಿದ್ದಲ್ಲಿ ಆ ಬಗ್ಗೆ ಆಕ್ಷೇಪಣೆ ಸಲ್ಲಿಸಬಹುದು. ಗ್ರಾಮೀಣ ಮತದಾರರ ಹೆಸರನ್ನು ಅಥವಾ ವಿಧಾನಸಭಾ ಮತದಾರರ ಪಟ್ಟಿಯಲ್ಲಿ ಸೇರ್ಪಡೆಯಾಗದೇ ಇರುವ ಹೆಸರುಗಳನ್ನು ನಗರ ಸ್ಥಳೀಯ ಸಂಸ್ಥೆಗಳಿಗಾಗಿ ತಯಾರಿಸಲಾಗಿರುವ ಮತದಾರರ ಪಟ್ಟಿಯಲ್ಲಿ ಸೇರ್ಪಡೆಯಾಗಿದ್ದಲ್ಲಿ ಮಾತ್ರ ಆಕ್ಷೇಪಣೆ ಸಲ್ಲಿಸಬಹುದು.

ದಿನಾಂಕ:17.06.2018ರೊಳಗಾಗಿ ಸಂಬಂಧ ಪಟ್ಟ ತಹಶೀಲ್ದಾರ್‌ರವರಿಗೆ ಆಕ್ಷೇಪಣೆಗಳನ್ನು ಸಲ್ಲಿಸಬಹುದು

(ವಿ.ವಿ.ಜ್ಯೋತ್ಸ್ನ)
ಜಿಲ್ಲಾಧಿಕಾರಿಗಳು
ಚಿತ್ರದುರ್ಗ ಜಿಲ್ಲೆ.

ಪ್ರತಿಯನ್ನು: ವಾರ್ತಾಧಿಕಾರಿಗಳು, ವಾರ್ತಾ ಇಲಾಖೆ, ಚಿತ್ರದುರ್ಗರವರಿಗೆ ರವಾನಿಸುತ್ತಾ ಸರ್ಕಾರಕ್ಕೆ ಯಾವುದೇ ವೆಚ್ಚ ಬಾರದಂತೆ ಪ್ರಕಟಿಸಲು ಸೂಚಿಸಿದೆ.